# ಲೋಕಸಭೆ ಸಾರ್ವತ್ರಿಕ ಚುನಾವಣೆ;ಚುನಾವಣೆಗೆ ನಿಯೋಜನೆಗೊಳ್ಳುವ ಅಧಿಕಾರಿ,ಸಿಬ್ಬಂದಿಗಳೊಂದಿಗೆ ಸಭೆ
## ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಎಚ್ಚರವಹಿಸಿ–ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್



ಬಳ್ಳಾರಿ,ಮಾ–:ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆಯ ಕರ್ತವ್ಯದಲ್ಲಿ ನಿಯೋಜನೆಗೊಳ್ಳುವ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಚುನಾವಣೆ ಘೋಷಣೆಯಾಗುವ ದಿನದಿಂದಲೇ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ನಿಗಾ ವಹಿಸಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ–2024ರ ಸಂಬಂಧ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಹಾಗೂ ಚುನಾವಣಾ ವೆಚ್ಚ ಹಾಗೂ ಇತರೆ ವಿಷಯಗಳ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚುನಾವಣೆ ಘೋಷಣೆಯಾದ ನಂತರ 24, 48 ಹಾಗೂ 72 ಗಂಟೆಗಳಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ಮೂರು ವಿವಿಧ ಭಾಗಗಳಲ್ಲಿ ಕ್ರಮಗಳನ್ನು ಕೈಗೊಳ್ಳಬೇಕಾಗುತ್ತದೆ ಎಂದು ಎಆರ್‌ಓ, ಎಇಆರ್‌ಓ, ಬಿಎಲ್‌ಓಗಳಿಗೆ ತಿಳಿಸಿದರು.ಮೊದಲ ಹಂತದಲ್ಲಿ 24 ಗಂಟೆಯೊಳಗೆ ಸರ್ಕಾರದ ಜಾಹೀರಾತುಗಳು, ಎರಡನೇ ಹಂತದಲ್ಲಿ 48 ಗಂಟೆಯೊಳಗೆ ಸರ್ಕಾರಿ ಸ್ವಾಮ್ಯದ ನಿಗಮ ಮಂಡಳಿಗಳು ಹಾಗೂ ಮೂರನೇ ಹಂತದಲ್ಲಿ 72 ಗಂಟೆಯೊಳಗೆ ಖಾಸಗಿ ವಲಯದಲ್ಲಿ ನೀತಿ ಸಂಹಿತೆಗೆ ವಿರುದ್ಧವಾದ ಜಾಹೀರಾತುಗಳನ್ನು ತೆಗೆಯಬೇಕಾಗುತ್ತದೆ. ಇದಕ್ಕೆ ಸಂಬಂಧಿಸಿದಂತೆ ಗ್ರಾಪಂ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ, ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಸೂಚಿಸಿದರು.

ಚುನಾವಣೆ ಘೋಷಣೆಯಾದ ತಕ್ಷಣ ಜಿಲ್ಲೆಯಲ್ಲಿ ರಾಜಕೀಯ ಪಕ್ಷಗಳ ಬ್ಯಾನರ್, ಫ್ಲೆಕ್ಸ್, ಉದ್ಘಾಟನೆಗೊಂಡ ಕಾಮಗಾರಿಗಳ ಫಲಕಗಳು, ಗ್ರಾಮ – ನಗರಗಳ ಸ್ವಾಗತ ಕಮಾನುಗಳು ಹಾಗೂ ಕೊಡುಗೆ ನೀಡಿದ ವಸ್ತುಗಳ ಮೇಲೆ ರಾಜಕೀಯ ವ್ಯಕ್ತಿಗಳ ಹಾಗೂ ಜನಪ್ರತಿನಿಧಿಗಳ ಭಾವಚಿತ್ರ ತೆರವುಗೊಳಿಸುವಂತೆ ಕ್ರಮ ವಹಿಸಬೇಕು ಎಂದು ಸಂಬಂಧ ಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದರೆ, ಎಂಸಿಸಿ ತಂಡಗಳು ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಸಹಾಯಕ ವೆಚ್ಚ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಟಿಕಗಳು, ವೀಡಿಯೋ ಸರ್ವೆಲನ್ಸ್, ವೀಡಿಯೋ ವಿವ್ಹಿಂಗ್ ತಂಡಗಳು, ಸ್ಟ್ಯಾಟಿಕ್ ಸರ್ವೆಲನ್ಸ್ ತಂಡಗಳು ಜಾಗೃತರಾಗಿ ಕಾರ್ಯನಿರ್ವಹಿಸಬೇಕು ಎಂದರು.

ಈಗಾಗಲೇ ಗಡಿಜಿಲ್ಲೆ ಭಾಗದಲ್ಲಿ ಚೆಕ್ ಪೋಸ್ಟರಗಳು ಕಾರ್ಯಪ್ರವೃತ್ತವಾಗಿವೆ. ಎಫ್‌ಎಸ್, ಎಸ್‌ಎಸ್‌ಟಿ, ವಿಎಸ್‌ಟಿ, ವಿವಿಟಿ ತಂಡ ಹಾಗೂ ಪೊಲೀಸ್ ಸೆಕ್ಟರ್‌ಗಳಿಗೆ ನಿಯೋಜನೆಗೊಳ್ಳುವ ಅಧಿಕಾರಿಗಳು ಚುನಾವಣಾ ವಿಷಯಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಚುನಾವಣಾ ಆಯೋಗದ ನಿರ್ದೇಶನಗಳನ್ನು ತಿಳಿದುಕೊಂಡು ತಮ್ಮ ಕರ್ತವ್ಯಗಳನ್ನು ಅಚ್ಚುಕಟ್ಟಾಗಿ ಪಾಲಿಸಬೇಕು ಎಂದರು.

ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ತಮ್ಮ ತಮ್ಮ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕಿದೆ. ಚುನಾವಣೆ ಕರ್ತವ್ಯವನ್ನು ನಿಷ್ಪಕ್ಷ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಹಿನ್ನೆಲೆಯಲ್ಲಿ ನಿಯೋಜನೆಗೊಂಡ ಎಲ್ಲ ತಂಡಗಳೂ ಹೆಚ್ಚು ಗಮನ ವಹಿಸಬೇಕು ಎಂದು ತಿಳಿಸಿದರು.

ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ತಂಡಗಳ ಅಧಿಕಾರಿಗಳಿಗೆ ಸೂಕ್ತ ತರಬೇತಿ ಮತ್ತು ಮಾರ್ಗದರ್ಶನ ನೀಡಬೇಕು. ಮಸ್ಟರಿಂಗ್, ಡಿ– ಮಸ್ಟರಿಂಗ್ ಕೇಂದ್ರ, ಎಣಿಕೆ ಕೇಂದ್ರ, ಪೊ?ಸ್ಟಲ್ ಬ್ಯಾಲೆಟ್, ಇ–ಎಸ್‌ಎಂಎಸ್, ಸಿ–ವಿಜಿಲ್, ಸುವಿಧಾ ಸೇರಿದಂತೆ ಅಗತ್ಯ ತರಬೇತಿ ಹೊಂದಬೇಕು ಎಂದರು.

ಜಿಲ್ಲೆಯಲ್ಲಿ ಗುರುತಿಸಲಾಗಿರುವ ಮತಗಟ್ಟೆಗಳಲ್ಲಿ ಕುಡಿಯುವ ನೀರು, ಬೆಳಕಿನ ವ್ಯವಸ್ಥೆ, ಶೌಚಾಲಯ, ಮತಗಟ್ಟೆಗಳ ದುರಸ್ಥಿ ಸಂಬಂಧಿದಂತೆ ಪರಿಶೀಲನೆ ನಡೆಸಬೇಕು. ಹೊಸ ಮತಗಟ್ಟೆ ಕೇಂದ್ರಗಳ ಅವಶ್ಯಕತೆ ಇದ್ದಲ್ಲಿ ಮಾಹಿತಿ ನೀಡಬೇಕು. ಸಂಬಂಧಿಸಿದ ಅಧಿಕಾರಿಗಳು ಮತಗಟ್ಟೆ ಕೇಂದ್ರಗಳಲ್ಲಿ ಯಾವುದೇ ರೀತಿಯ ಕೊರತೆಯಾಗದಂತೆ ಮೂಲಸೌಕರ್ಯ ಕಲ್ಪಿಸಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಸ್ವೀಪ್ ಸಮಿತಿಯ ನೋಡೆಲ್ ಅಧಿಕಾರಿ ಹಾಗೂ ಜಿಪಂ ಸಿಇಓ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಚುನಾವಣೆ ಕರ್ತವ್ಯಗಳನ್ನು ತಂಡವಾಗಿ ಹೊಣೆಗಾರಿಕೆಯಿಂದ ಕೆಲಸ ನಿರ್ವಹಿಸಿದರೆ ಯಶಸ್ವಿಯಾಗಲು ಸಾಧ್ಯವಾಗಲಿದೆ. ಹಾಗಾಗಿ ಪ್ರತಿಯೊಬ್ಬರೂ ನಿಯೋಜಿಸಿದ ಕರ್ತವ್ಯವನ್ನು ಯಾವುದೇ ಲೋಪ ಇಲ್ಲದೆ ನಿರ್ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಅವರು ಮಾತನಾಡಿ, ಸೂಕ್ಷ್ಮ ಮತಗಟ್ಟೆ ಕೇಂದ್ರಗಳ ಬಗ್ಗೆ ನಿಗಾವಹಿಸಬೇಕು. ಯಾವುದೇ ಅಹಿತಕರ ಘಟನೆಗಳಿಗೆ ಆಸ್ಪದ ನೀಡಬಾರದು. ಸಮಸ್ಯೆ ಕಂಡುಬಂದಲ್ಲಿ ಪೊಲೀಸ್ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತರಾದ ಹೇಮಂತ್, ಚುನಾವಣಾ ತರಬೇತುದಾರ ರುದ್ರೇಶ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಹಶೀಲ್ದಾರರು ಹಾಗೂ ತಾಪಂ ಇಓ ಗಳು ಉಪಸ್ಥಿತರಿದ್ದರು.

# ಆನೆಗೊಂದಿ ಉತ್ಸವಕ್ಕೆ ಸಕಲ ಸಿದ್ಧತೆ: ಜಿ.ಜನಾರ್ಧನ ರೆಡ್ಡಿ



ಕೊಪ್ಪಳ ಮಾರ್ಚ್ 09–: ಆನೆಗೊಂದಿ ಉತ್ಸವಕ್ಕೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಗಂಗಾವತಿ ಶಾಸಕರಾದ ಜಿ.ಜನಾರ್ಧನ ರೆಡ್ಡಿ ಅವರು ಹೇಳಿದರು. ಆನೆಗೊಂದಿ ಉತ್ಸವ–2024ರ ಹಿನ್ನೆಲೆಯಲ್ಲಿ ಮಾರ್ಚ್ 9ರಂದು ಆನೆಗೊಂದಿಯಲ್ಲಿ ವೇದಿಕೆ ಸೇರಿದಂತೆ ಇತರ ಸಿದ್ಧತೆಗಳನ್ನು ಪರಿಶೀಲಿಸಿ, ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ವಿಜಯನಗರ ಸಾಮ್ರಾಜ್ಯದ ತೊಟ್ಟಿಲು, ಮೊದಲ ರಾಜಧಾನಿ ಆನೆಗೊಂದಿಯಲ್ಲಿ ಇದೇ ಮಾರ್ಚ್ 11 ಮತ್ತು 12ರಂದು ಐತಿಹಾಸಿಕ ಆನೆಗೊಂದಿ ಉತ್ಸವವು ನಡೆಯಲಿದೆ. ವಿಜಯನಗರ ಸಾಮ್ರಾಜ್ಯದ ಗತವೈಭವವನ್ನು ಸಾರುವ ಈ ಉತ್ಸವವು ನಡೆಯುವ ಮುಖ್ಯ ವೇದಿಕೆಗೆ ಆನೆಗೊಂದಿ ಸಂಸ್ಥಾನದ ರಾಜ ವಂಶಸ್ಥರಾದ ಶ್ರೀರಂಗದೇವರಾಯಲು ಅವರ ಹೆಸರಿಡಲಾಗಿದೆ. ಅದೇ ರೀತಿ ಎರಡನೇ ವೇದಿಕೆಗೆ ಶಬರಿ ಹೆಸರಿಡಲಾಗಿದೆ. ಉತ್ಸವದ ಉದ್ಘಾಟನೆಗೆ ಮುಖ್ಯ ಮಂತ್ರಿಗಳು, ಉಪ ಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಇತರ ಸಚಿವರು, ಶಾಸಕರು ಮತ್ತು ಇತರ ಜನಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ ಎಂದರು.

ಆನೆಗೊಂದಿ ಉತ್ಸವವದ ಮೊದಲ ದಿನದ ಕಾರ್ಯಕ್ರಮದಲ್ಲಿ ಪ್ರಖ್ಯಾತ ಗಾಯಕರಾದ ಹಂಸಲೇಖ, ನಟ ದೃವ ಸರ್ಜಾ ಸೇರಿದಂತೆ ರಾಜ್ಯದ ಮತ್ತು ಸ್ಥಳೀಯ ಖ್ಯಾತ ಕಲಾವಿದರಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಎರಡನೇ ದಿನ ನಟ ಶ್ರೀಮುರಳಿ, ಗಾಯಕ ಅರ್ಜುನ ಜನ್ಯಾ ಸೇರಿದಂತೆ ಇತರ ಕಲಾವಿದರು ಹಾಗೂ ಕಲಾ ತಂಡಗಳಿಂದ ಸಂಗೀತ, ನೃತ್ಯ, ಭರತನಾಟ್ಯ ಒಳಗೊಂಡಂತೆ ವಿಭಿನ್ನ ರೀತಿಯ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ಅದಲ್ಲದೇ ಉತ್ಸವ ಅಂಗವಾಗಿ ಈಗಾಗಲೇ ಕ್ರೀಡಾಕೂಟ ನಡೆಯುತ್ತಿದ್ದು, ಹಗ್ಗ–ಜಗ್ಗಾಟದಂತಹ ಗ್ರಾಮೀಣ ಕ್ರೀಡೆಗಳು ಗಮನ ಸೆಳೆಯುತ್ತಿವೆ. ಎಲ್ಲಾ ಸಾರ್ವಜನಿಕರು ಉತ್ಸವದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗಂಗಾವತಿ ತಹಶೀಲ್ದಾರರಾದ ಯು.ನಾಗರಾಜ ಸೇರಿದಂತೆ ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ದೇಶದ ರೈತರು ಗುಣಾತ್ಮಕ ಬೆಳೆಗಳನ್ನು ಬೆಳೆದು ಉದ್ಯಮಿಗಳಾಗಬೇಕಾಗಿದೆ : ಶೋಭಾ ಕರಂದ್ಲಾಜೆ

(1 ನೇ ಪುಟದಿಂದ)

ಅಧ್ಯಕ್ಷೀಯ ನುಡಿಗಳನ್ನಾಡಿದ ಡಾ.ಪ್ರಭಾಕರ ಕೋರೆಯವರು ಇಂದು ಕೃಷಿ ಮಾಡುವ ರೈತನಗೆ ಹೆಣ್ಣುಮಕ್ಕಳನ್ನು ಕೊಡುತ್ತಿಲ್ಲ. ಇದು ದುರ್ದೈವದ ಸಂಗತಿ. ಎಲ್ಲರಿಗೂ ಉತ್ತಮ ಸಂಬಳವನ್ನು ಪಡೆಯುವವರೆ ಬೇಕಾಗಿದ್ದಾರೆ. ಅವನು ನಜವಾದ ಅನ್ನದಾತ. ಇಂದು ಚಿಕ್ಕೋಡಿ ಭಾಗದಲ್ಲಿ ರೈತರು ಹೊಸ ಹೊಸ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಪ್ರಗತಿಪರ ರೈತರೆನಿಸಿಕೊಂಡಿದ್ದಾರೆ. ಅದನ್ನು ಗಮನದಲ್ಲಿಟ್ಟುಕೊಂಡು ಬೆಳಗಾವಿ ಮತ್ತಕೊಪ್ಪದಲ್ಲಿ ಕೃಷಿ ವಿಜ್ಞಾನ ಕೇಂದ್ರವನ್ನು ಹುಟ್ಟುಹಾಕಿ ಈ ಭಾಗದ ರೈತರಿಗೆ ಅನುಕೂಲ ಕಲ್ಪಿಸಲಾಗಿದೆ. ಉತ್ತಮ ಬೀಜ, ಬೆಳೆಗಳ ತರಬೇತಿ, ಹೈನುಗಾರಿಕೆ ಮೊದಲ್ಗೊಂಡು ಅನೇಕ ಪ್ರಯೋಗಗಳಿಗೆ ಕೇಂದ್ರ ತರಬೇತಿಯನ್ನು ನೀಡುತ್ತಿದೆ. ರೈತರು ಇದರ ಸದುಪಯೋಗಪಡಿಸಿಕೊಂಡಾಗ ನಮ್ಮ ಶ್ರಮ ಸಾರ್ಥಕವಾಗುತ್ತದೆ. ಕೆಎಲ್‌ಇ ಸಂಸ್ಥೆಯು 107 ವರ್ಷಗಳ ತನ್ನ ಅಭಿಯಾನದಲ್ಲಿ ಶಿಕ್ಷಣ–ಸಂಶೋಧನೆ–ಆರೋಗ್ಯ ಕ್ಷೇತ್ರದಲ್ಲಿ ಅಗಾಧವಾದ ಸೇವೆಯನ್ನು ಸಲ್ಲಿಸಿತ್ತು. ಇದು ಕೃಷಿ ಕೇಂದ್ರದ ಮೂಲಕ ಮತ್ತೊಂದು ಹೆಜ್ಜೆ ಮುಂದೆ ಇಟ್ಟಿದೆ ಎಂದು ಹೇಳಿದರು. ನಮಗೆ ಸರ್ಕಾರದಿಂದ ಸಬ್ಸಿಡಿಗಳನ್ನು ಕೇಳುವುದಿಲ್ಲ ನಮಗೆ ನೀರು ಕೊಡಿ. ನೀರಿದ್ದರೆ ಕೃಷಿ ಸಾಧ್ಯ. ಅದಕ್ಕಾಗಿ ಯೋಜನೆಗಳನ್ನು ಸರ್ಕಾರ ರೂಪಿಸಬೇಕಾಗಿದೆ. ಇಸ್ರೇಲ್ ದೇಶವು ಹನಿನೀರಾವರಿಗಾಗಿ ಸಾಕಷ್ಟು ಶ್ರಮಿಸಿ ಯಶಸ್ಸನ್ನು ಸಾಧಿಸಿದೆ ಅಂತೆಯೇ ಭಾರತವು ಹೆಜ್ಜೆ ಇಡುತ್ತಿದೆ. ನಾನು 20 ರೈತರನ್ನು ಇಸ್ರೇಲ್ ದೇಶಕ್ಕೆ ಕರೆದುಕೊಂಡು ಹೋಗಿ ಅಲ್ಲಿ ನೀರಾವರಿ ಉಪಯೋಗಗಳನ್ನು ಪ್ರಾತ್ಯಕ್ಷಿಯ ಮೂಲಕ ತೋರಿಸಿಕೊಟ್ಟಿದ್ದೇನೆ. ಎಲ್ಲ ರೈತರು ಹನಿ ನೀರಾವರಿಯೆಡೆಗೆ ಗಮನಹರಿಸಬೇಕೆಂದು ಹೇಳಿದರು.

ಧಾರವಾಡ ಕೃಷಿ ವಿಜ್ಞಾನ ಕೇಂದ್ರದ ಕುಲಪತಿಗಳಾದ ಡಾ.ಪಿ.ಎಲ್. ಪಾಟೀಲ ಅವರು ಗೌರವ ಅತಿಥಿಗಳಾಗಿ ಆಗಮಿಸಿ, ಕೃಷಿ ವಿಜ್ಞಾನ ಕೇಂದ್ರವು ವಿವಿಧ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡು ರೈತರಿಗೆ ತರಬೇತಿ ನೀಡುತ್ತಿದೆ. ಹಸಿರುಕ್ರಾಂತಿ ಮಾಡಿದೆ. ನಮ್ಮ ರೈತರು ಸ್ವಾವಲಂಬಿಯಾಗುವಲ್ಲಿ ಅಹರ್ನಿಶಿಯಾಗಿ ಪ್ರಯತ್ನಿಸುತ್ತಿದೆ. ಎಲ್ಲರೂ ಇದರ ಪ್ರಯೋಜನ ಪಡೆದು ಗುಣಾತ್ಮಕವಾದ ಬೆಳೆಯುವಂತಾಗಬೇಕೆಂದು ಸಲಹೆ ನೀಡಿದರು.

ಐಸಿಎಆರ್ ಅಟಾರಿಯ ನಿರ್ದೇಶಕರಾದ ಡಾ.ವಿ.ವೆಂಕಟಸುಬ್ರಮಣಿಯನ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೇಂದ್ರ ಕಾರ್ಯಾಧ್ಯಕ್ಷರು ಹಾಗೂ ಕೆಎಲ್‌ಇ ಆಡಳಿತ ಮಂಡಳಿಯ ನಿರ್ದೇಶಕರಾದ ಬಸವರಾಜ ಆರ್. ಪಾಟೀಲ ಸ್ವಾಗತಿಸಿದರು. ಡಾ.ಮಹೇಶ ಗುರನಗೌಡರ ನಿರೂಪಿಸಿದರು. ಕೆವಿಕೆ ಮುಖ್ಯಸ್ಥರಾದ ಶ್ರೀದೇವಿ ಅಂಗಡಿ ವಂದಿಸಿದರು.

ಇದೇ ಸಂದರ್ಭದಲ್ಲಿ ಕೆವಿಕೆ ವಿಡಿಯೋ, ಆರು ಗ್ರಂಥಗಳು, ಜೈವಿಕ ಪರಿಕರಗಳನ್ನು ಬಿಡುಗಡೆಗೊಳಿಸಲಾಯಿತು.ಪ್ರಗತಿಪರ ರೈತರಾದ ಮುದಕವಿಯ ಈರವ್ವ ಮಠಪತಿ, ಕುರುಗುಂದದ ಮಹಾದೇವಿ ಅಪ್ಪಯ್ಯನವರಮಠ, ವಸುಂಡಿಯ ಪ್ರಶಾಂತ ನೇಗೂರ, ಬೈಲಹೊಂಗಲದ ಓಂಪ್ರಕಾಶ ಪಾಟೀಲ, ಹಿರೇಕೊಪ್ಪದ ಅಣ್ಣೇಶಗೌಡ ಪಾಟೀಲ, ಸುನ್ನಾಳದ ಅಜ್ಜಪ್ಪ ಕುಲಗೋಡ ಅವರನ್ನು ಮಾನ್ಯ ಸಚಿವೆ ಗೌರವಿಸಿ ಸತ್ಕರಿಸಿದರು. ಕೆಎಲ್‌ಇ ಉಪಾಧ್ಯಕ್ಷರಾದ ಬಸವರಾಜ ತಟವಟಿ, ನಿರ್ದೇಶಕರಾದ ಡಾ.ವಿಶ್ವನಾಥ ಪಾಟೀಲ, ಡಾ.ವಿ.ಎಸ್.ಸಾಧುನವರ, ಬಾಬಣ್ಣ ಮೆಟಗುಡ್, ಪ್ರವೀಣ ಬಾಗೇವಾಡಿ ಉಪಸ್ಥಿತರಿದ್ದರು. ಕೆಎಲ್‌ಇ ಸಂಗೀತ ಶಾಲೆಯ ಸಿಬ್ಬಂದಿ ಪ್ರಾರ್ಥಿಸಿದರು.

ಮತ್ತಿಕೊಪ್ಪದ ಐಸಿಎಆರ್–ಕೆಎಲ್‌ಇ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ 'ರೈತ ಭವನ', 'ಸಿಬ್ಬಂದಿ ವಸತಿ ಗೃಹ'ಗಳ ಹಾಗೂ ಸ್ವಯಂಚಾಲಿತ ಹನಿ ನೀರಾವರಿ ಘಟಕದ ಉದ್ಘಾಟನೆ ಕಾರ್ಯಕ್ರಮವನ್ನು ಆಯೋಜಿಲಾಗಿತ್ತು.

ಕೇಂದ್ರ ಸರ್ಕಾರದ ಸನ್ಮಾನ್ಯ ಕೃಷಿ ಮತ್ತು ರೈತರ ಕಲ್ಯಾಣ ರಾಜ್ಯ ಸಚಿವರಾದ ಸುಶ್ರೀ ಶೋಭಾ ಕರಂದ್ಲಾಜೆ ಅವರು ಉದ್ಘಾಟನಾ ಸಮಾರಂಭವನ್ನು ನೆರವೇರಿಸಿದರು.

# ನನ್ನ ವಿರುದ್ಧ ಪಿತೂರಿ ಒಳ್ಳೆಯದು : ಶೋಭಾ ಕರಂದ್ಲಾಜೆ



ಬೆಳಗಾವಿ, ಮಾ. 9– ಉಡುಪಿ–ಚಿಕ್ಕಮಗಳೂರು ಕ್ಷೇತ್ರದಲ್ಲಿ ನನ್ನ ವಿರುದ್ಧ ನಡೆಯುತ್ತಿರುವ ಪಿತೂರಿಯಿಂದ ನನಗೆ ಒಳ್ಳೆಯದೇ ಆಗಿದೆ. ಸತ್ಯ ಏನೆಂಬುದು ಎಲ್ಲರಿಗೂ ಗೊತ್ತಾಗಿದೆ ಎಂದು ಕೇಂದ್ರ ಕೃಷಿ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಹೇಳಿದರು. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಡುಪಿ–ಚಿಕ್ಕಮಗಳೂರು ಕ್ಷೇತ್ರದಿಂದ ನನಗೆ ಟಿಕೆಟ್ ನೀಡಿಕೆಗೆ ವಿರೋಧಿಸಿ ಪಿತೂರಿ ನಡೆದಿದೆ. ಇದರಿಂದ ನನಗೆ ಒಳ್ಳೆಯದೆ ಆಗಿದೆ. ನಾನು ಏನೆಲ್ಲಾ ಸಾಧನೆ ಮಾಡಿದ್ದೇನೆ ಎಂಬುದು ನಾಯಕರಿಗೆ, ಜನರಿಗೆ ಗೊತ್ತಾಗಿದೆ ಎಂದರು.ಯಾವಾಗ ನಮಗೆ ವಿರೋಧ ವ್ಯಕ್ತವಾಗುತ್ತದೋ ಆಗ ನಾಯಕರು ನಮ್ಮ ಮಾಹಿತಿ ಕಲೆ ಹಾಕುತ್ತಾರೆ. ಕೆಲಸಗಳನ್ನು ಗುರುತಿಸುತ್ತಾರೆ. ಏಕೆ ವಿರೋಧ ವ್ಯಕ್ತವಾಗಿದೆ ಎಂಬುದನ್ನು ಪರಾಮರ್ಶೆ ಮಾಡುತ್ತಾರೆ. ಆಗ ಸತ್ಯ ಗೊತ್ತಾಗುತ್ತದೆ. ಇದರಿಂದ ನನ್ನ ವ್ಯಕ್ತಿತ್ವ, ಸಾಧನೆ ಎಲ್ಲವೂ ತಿಳಿಯಲಿದೆ ಎಂದರು.ಈ ಚುನಾವಣೆಯಲ್ಲಿ ಬಿಜೆಪಿಯ ಹಲವು ಹಾಲಿ ಸಂಸದರಿಗೆ ಟಿಕೆಟ್ ಕೈ ತಪ್ಪುತ್ತದೆ ಎಂಬ ವರದಿಗಳಿಗೆ ಪ್ರತಿಕ್ರಿಯಿಸಿದ ಅವರು, ಇದು ಮಾಧ್ಯಮಗಳಲ್ಲಿ ಮಾತ್ರ ಹರಿದಾಡುತ್ತಿದೆ. ನಮ್ಮ ನಾಯಕರ್ಯಾರು ಈ ಬಗ್ಗೆ ಮಾತನಾಡಿಲ್ಲ. ಯಾರೂ ಒಳ್ಳೆ ಕೆಲಸ ಮಾಡಿದ್ದಾರೋ ಅವರಿಗೆ ಟಿಕೆಟ್ ಸಿಗುತ್ತದೆ ಇದು ನಮ್ಮ ಪಕ್ಷದ ಸೂತ್ರ ಎಂದು ಹೇಳಿದರು. ಉಡುಪಿ–ಚಿಕ್ಕಮಗಳೂರು ಕ್ಷೇತ್ರದಲ್ಲಿ ನಾನು ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದ್ದೇನೆ. ಅಭಿವೃದ್ಧಿ ಆಧಾರದ ಮೇಲೆಯೆ ಮತ ಕೇಳುತ್ತೇನೆ. ಈ ಬಾರಿಯೂ ನನಗೆ ವರಿಷ್ಠರು ಟಿಕೆಟ್ ನೀಡುವ ವಿಶ್ವಾಸವಿದೆ. ಹಾಗೆಯೇ ಗೆಲ್ಲುವ ವಿಶ್ವಾಸವೂ ಇದೆ ಎಂದರು.ಚುನಾವಣೆಯಲ್ಲಿ ಕಳೆದ ಹತ್ತು ವರ್ಷಗಳಲ್ಲಿ ಪ್ರಧಾನ ಮೋದಿ ಅವರ ಸರ್ಕಾರದ ಸಾಧನೆಗಳು ದೇಶದ ರಕ್ಷಣೆ ಮತ್ತು ಅಭಿವೃದ್ಧಿ ಬಗ್ಗೆ ಪ್ರಧಾನ ಮೋದಿ ಅವರಿಗಿರುವ ದೂರದೃಷ್ಟಿ, ಕಾಳಿಜಿ ಎಲ್ಲವೂ ಚುನಾವಣೆ ಗೆಲ್ಲಲು ನೆರವಾಗಲಿದೆ ಎಂದು ಹೇಳಿದರು.

# ಮಾ.11 ರಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ
## ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕರೆ: ಡಿಸಿ ಪ್ರಶಾಂತ್ ಕುಮಾರ್



ಬಳ್ಳಾರಿ,ಮಾ–: ಜಿಲ್ಲೆಯಲ್ಲಿ ಸರ್ಕಾರದ ಪ್ರಮುಖ, ಜನಪ್ರಿಯ ಯೋಜನೆಗಳ ಕುರಿತು ಜಾಗೃತಿ ಮೂಡಿಸಲು ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಮಾರ್ಚ್ 11 ರಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ ಹಮ್ಮಿಕೊಳ್ಳಲಾಗುತ್ತಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಕರೆ ನೀಡಿದರು. ಶನಿವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಮಟ್ಟದ ಸಮಾವೇಶ ಹಮ್ಮಿಕೊಳ್ಳುವ ಕುರಿತು ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.ಸಮಾವೇಶದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳನ್ನು ಸೇರಿಸಲು ಪ್ರತಿ ತಾಲೂಕಿನಿಂದ ಫಲಾನುಭವಿಗಳನ್ನು ಸಮಾವೇಶಕ್ಕೆ ಕರೆ ತರಲು ಬಸ್ ವ್ಯವಸ್ಥೆ ಕಲ್ಪಿಸುವಂತೆ ತಹಶೀಲ್ದಾರರಿಗೆ ಹೇಳಿದರು.ಸರ್ಕಾರದ ನಿರ್ದೇಶನದ ಮೇರೆಗೆ ಗ್ಯಾರಂಟಿ ಯೋಜನೆಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸಲು ಸಮಾವೇಶವನ್ನು ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಫಲಾನುಭವಿಗಳಿಗೆ ಬರ್‌ಗಳ ವ್ಯವಸ್ಥೆ ಮಾಡಲಾಗು ವುದೆಂದು ತಿಳಿಸಿದರು.ಸರ್ಕಾರದ ಗ್ಯಾರಂಟಿ ಯೋಜನೆಗಳು, ಇತರೆ ಅಭಿವೃದ್ಧಿ ಕಾಮಗಾರಿಗಳ ಕುರಿತ ಜನರಲ್ಲಿ ಜಾಗೃತಿ ಮೂಡಿಸಲು ಗ್ಯಾರಂಟಿ ಸಮಾವೇಶವನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜೀತ್ ಕುಮಾರ್ ಬಂಡಾರು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತರಾದ ಹೇಮಂತ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು,ತಹಶೀಲ್ದಾರರುಹಾಗೂತಾಪಂಇಓ ಗಳು ಉಪಸ್ಥಿತರಿದ್ದರು.

# ಡಾ.ಪ್ರಭು ಗಂಜಿಹಾಳ ಅಯೋಧ್ಯೆ ಕವಿ ಸಮ್ಮೇಲನಕ್ಕೆ ಆಯ್ಕೆ



ಗದಗ : ಉತ್ತರಪ್ರದೇಶದ ಅಯೋಧ್ಯೆಯಲ್ಲಿ ಮಾ.15 ರಂದು ನಡೆಯಲಿರುವ ರಾಮೋತ್ಸವ–24ರ 'ಕವಿ ಸಮ್ಮೇಲನ' ದಲ್ಲಿ ಕಾವ್ಯ ವಾಚನಕ್ಕೆಕವಿ, ಕನ್ನಡ ಸಹಪ್ರಾಧ್ಯಾಪಕ ಡಾ.ಪ್ರಭು ಗಂಜಿಹಾಳ ಆಯ್ಕೆ ಆಗಿದ್ದಾರೆ. ಅಯೋಧ್ಯೆಯಲ್ಲಿ ಜನೇವರಿ 14 ರಿಂದ ಆರಂಭವಾ ಗಿರುವ ರಾಮೋತ್ಸವ ಸಮಿತಿ –2024 ರ ಕಾರ್ಯಕ್ರಮಗಳು ಮಾ.24 ರವರೆಗೂ ನಡೆಯುಲಿದ್ದು, ಮಾ.15ರಂದು ಬಹುಭಾಷಾ ಕವಿ ಸಮ್ಮೇಲನ ಬಿಹಾರದ ಕವಿ,ಸಾಹಿತಿಗಳಾದ ಈಶ್ವರ ಚಂದ್ರ ಝಾ ಅವರ ಮಾರ್ಗದರ್ಶನದಲ್ಲಿ ನಡೆಯಲಿದೆ ಎಂದು ರಾಮೋತ್ಸವ–2024ರ ಸಮಿತಿ–5ರ ಸಂಯೋಜಕ ಅಶುತೋಶ ದ್ವಿವೇದಿ ತಿಳಿಸಿದ್ದಾರೆ. ಕಾವ್ಯವಾಚನಕ್ಕೆ ಆಯ್ಕೆ ಆಗಿರುವ ಡಾ.ಪ್ರಭು ಗಂಜಿಹಾಳ ರೋಣ ತಾಲೂಕಿನ ಹೊಳೆಆಲೂರಿನ ಶ್ರೀ ಕಲ್ಮೇಶ್ವರ ಕಲಾ,ವಿಜ್ಞಾನ,ವಾಣಿಜ್ಯ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರಾಗಿದ್ದಾರೆ. ಕವಿಸಮ್ಮೇಲನದಲ್ಲಿ ಪಾಲ್ಗೊಳ್ಳುತ್ತಿರುವ ಇವರಿಗೆ ನಿವೃತ್ತ ತೋಟಗಾರಿಕಾ ಅಧಿಕಾರಿ ಸಿ.ಆರ್. ಗೌಡರ, ಪ್ರಾಚಾರ್ಯ ಡಾ.ಪಿಎಸ್.ಕಣವಿ, ಡಾ.ಎಸ್.ಬಿ.ಸಜ್ಜನರ್ ಮತ್ತು ಮಹಾವಿದ್ಯಾಲಯದ ಸಿಬ್ಬಂದಿವರ್ಗ, ಕನ್ನಡ ಸಾಹಿತ್ಯ ಪರಿಷತ್ ಗದಗ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ,ಡಾ.ರಾಜಶೇಖರ ದಾನರಡ್ಡಿ, ಪ್ರೊ.ವಿ.ಎಂ.ಗುರುಮಠ,ಪತ್ರಕರ್ತರಾದ ಮೌನೇಶ ಬಡಿಗೇರ, ಡಾ.ವೀರೇಶ ಹಂಡಿಗಿ,ರಾಘವೇಂದ್ರ ಕುಲಕರ್ಣಿ,ಪ್ರಾ.ಬಸವರಾಜ ಗಂಜಿಹಾಳ, ಸಾಹಿತಿಗಳು,ಕಲಾವಿದರುಮತ್ತು ಪತ್ರಕರ್ತ ಬಳಗದ ಸದಸ್ಯರು ಅಭಿನಂದಿಸಿದ್ದಾರೆ.

# ಆನೆಗೊಂದಿ ಉತ್ಸವ: ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಆಕರ್ಷಕ

ಕೊಪ್ಪಳ ಮಾರ್ಚ್ 09–: ಆನೆಗೊಂದಿ ಉತ್ಸವ–2024ರ ಅಂಗವಾಗಿ ಆನೆಗೊಂದಿಯ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಮಾರ್ಚ್ 9ರಂದು ಆಕರ್ಷಕ ಬಾಲ್ ಬ್ಯಾಡ್ಮಿಂಟನ್ ಪಂದ್ಯಾವಳಿ ಜರುಗಿತು. ಮಾ.11 ಮತ್ತು 12ರಂದು ನಡೆಯಲಿರುವ ಆನೆಗೊಂದಿ ಉತ್ಸವ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಗಂಗಾವತಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಸಹಯೋಗದಲ್ಲಿ ವಿವಿಧ ಕ್ರೀಡೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಬಾಲ್ ಬ್ಯಾಡ್ಮಿಂಟನ್ ಸ್ಪರ್ಧೆಗೆ ವಿವಿಧ ತಂಡಗಳಿಂದ ನೋಂದಾಯಿಸಲಾಗಿತ್ತು. ವಿದ್ಯಾರ್ಥಿಗಳು, ಸಾರ್ವಜನಿಕರು ಅತ್ಯಂತ ಉತ್ಸಾಹದಿಂದ ಸ್ಪರ್ಧೆಗಳನ್ನು ವೀಕ್ಷಿಸಿದರು.

# ಆನೆಗೊಂದಿ ಉತ್ಸವ: ಹಗ್ಗ–ಜಗ್ಗಾಟದಲ್ಲಿ ಹೊಸಕೇರಾ ತಂಡ ಜಯ

ಕೊಪ್ಪಳ ಮಾರ್ಚ್ 09–: ಆನೆಗೊಂದಿ ಉತ್ಸವ–2024ರ ಅಂಗವಾಗಿ ಆನೆಗೊಂದಿಯ ಸರ್ಕಾರಿ ಪ್ರೌಢಶಾಲೆ ಆವರಣದಲ್ಲಿ ಮಾರ್ಚ್ 9ರಂದು ಹಮ್ಮಿಕೊಂಡಿದ್ದ ಹಗ್ಗ–ಜಗ್ಗಾಟ ಸ್ಪರ್ಧೆಯಲ್ಲಿ ಗಂಗಾವತಿ ತಾಲ್ಲೂಕಿನ ಹೊಸಕೇರಾದ ದುರ್ಗಾ ಪರಮೇಶ್ವರಿ ತಂಡವು ಜಯಗಳಿಸಿದೆ. ಮಾರ್ಚ್ 11 ಮತ್ತು 12ರಂದು ನಡೆಯಲಿರುವ ವಿಜಯನಗರ ಸಾಮ್ರಾಜ್ಯದ ತೊಟ್ಟಿಲು ಆನೆಗೊಂದಿ ಉತ್ಸವ ನಿಮಿತ್ತ ಕುಸ್ತಿ, ಕಬಡ್ಡಿ, ವಾಲಿಬಾಲ್, ಬಾಲ್ ಬ್ಯಾಡ್ಮಿಂಟನ್ ಸೇರಿದಂತೆ ವಿವಿಧ ಕ್ರೀಡೆಗಳನ್ನು ಆಯೋಜಿಸಲಾಗಿದ್ದು, ಇದರ ಭಾಗವಾಗಿ ಶನಿವಾರ ಜರುಗಿದ ಹಗ್ಗ–ಜಗ್ಗಾಟ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಹೊಸಕೇರಾದ ದುರ್ಗಾ ಪರಮೇಶ್ವರಿ ತಂಡವು ಇತ್ತೀಚೆಗೆ ನಡೆದ ಕನಕಗಿರಿ ಉತ್ಸವದ ಹಗ್ಗ–ಜಗ್ಗಾಟ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದಿತ್ತು. ಆನೆಗೊಂದಿ ಉತ್ಸವದ ಹಗ್ಗ–ಜಗ್ಗಾಟದಲ್ಲಿ ಕೊಪ್ಪಳದ ನಾಗರಾಜ ನೇತೃತ್ವದ ತಂಡ ದ್ವಿತೀಯ ಹಾಗೂ ಕನಕಗಿರಿಯ ತಾಲ್ಲೂಕಿನ ಹನುಮನಾಳ ತಂಡವು ತೃತೀಯ ಸ್ಥಾನ ಪಡೆದಿದ್ದು, ಈ ತಂಡಗಳಿಗೆ ಪ್ರಶಸ್ತಿ ಪತ್ರ ಹಾಗೂ ಬಹುಮಾನವನ್ನು ವಿತರಣೆ ಮಾಡಲಾಯಿತು.

# ಆನೆಗೊಂದಿ ಉತ್ಸವಕ್ಕೆ ಸಿದ್ಧತೆ ಬಲು ಜೋರು

ಕೊಪ್ಪಳ ಮಾರ್ಚ್ 09–: ವಿಜಯನಗರ ಸಾಮ್ರಾಜ್ಯದ ತೊಟ್ಟಿಲು ಆನೆಗೊಂದಿಯಲ್ಲಿ 2024ರ ಆನೆಗೊಂದಿ ಉತ್ಸವದ ಸಿದ್ಧತಾ ಕಾರ್ಯಗಳು ಭರದಿಂದ ಸಾಗಿವೆ. ಮಾರ್ಚ್ 11 ಮತ್ತು 12ರಂದು ಎರಡು ದಿನಗಳ ಕಾಲ ನಡೆಯಲಿದ್ದು, ಉತ್ಸವದ ತಯಾರಿಯ ಭಾಗವಾದ ವೇದಿಕೆ ಸ್ಥಳ ಮತ್ತು ಆವರಣ ಸ್ವಚ್ಛತಾ ಕಾರ್ಯಗಳು ನಡೆದಿದೆ. ಅಲ್ಲದೇ ಆನೆಗೊಂದಿಯ ಐತಿಹಾಸಿಕ ಸ್ಥಳಗಳ ಸ್ವಚ್ಛತಾ ಕಾರ್ಯಗಳು ಸಹ ಅಲ್ಲಲ್ಲಿ ನಡೆಯುತ್ತಲಿವೆ. ಉತ್ಸವದ ಮುಖ್ಯ ವೇದಿಕೆ ನಿರ್ಮಾಣ, ಬ್ಯಾರಿಕೇಡ್ ಅಳವಡಿಕೆ, ಗಣ್ಯರ ಸಾರ್ವಜನಿಕರ ಪ್ರತ್ಯೇಕ ಆಸನಗಳ ವ್ಯವಸ್ಥೆ, ಪಾರ್ಕಿಂಗ್ ವ್ಯವಸ್ಥೆ ಸೇರಿದಂತೆ ನಾನಾ ಕಾರ್ಯಗಳು ಬಲು ಜೋರಾಗಿ ನಡೆಯುತ್ತಿವೆ. ಆನೆಗೊಂದಿ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸ್ವಾಗತ ಫಲಕಗಳು, ವಿದ್ಯುತ್ ದೀಪಗಳ ಅಲಂಕಾರ ಸಾರ್ವಜನಿಕರ ಗಮನ ಸೆಳೆಯುವಂತಿವೆ.

# ಆನೆಗೊಂದಿ ಉತ್ಸವ: ಮುಕ್ತ ಮ್ಯಾರಥಾನ್ ಸ್ಪರ್ಧೆ ಮಾ.10ಕ್ಕೆ


ಕೊಪ್ಪಳ ಮಾರ್ಚ್ 09–: ಆನೆಗೊಂದಿ ಉತ್ಸವ–2024ರ ಅಂಗವಾಗಿ ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾಡಳಿತ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದೊಂದಿಗೆ ಪುರುಷ ಹಾಗೂ ಮಹಿಳೆಯರಿಗೆ ಮುಕ್ತ ಮ್ಯಾರಥಾನ್ ಸ್ಪರ್ಧೆಯನ್ನು ಮಾರ್ಚ್ 10ರಂದು ಬೆಳಿಗ್ಗೆ 6.30 ಗಂಟೆಗೆ ಆನೆಗೊಂದಿಯ ಕಡೆಬಾಗಿಲುದಲ್ಲಿ ಏರ್ಪಡಿಸಲಾಗಿದೆ. ಮ್ಯಾರಾಥಾನ್ ಆನೆಗೊಂದಿಯ ಕಡೆಬಾಗಿಲುದಿಂದ ಪ್ರಾರಂಭಗೊಂಡು ಅಂಜನಾದ್ರಿ ಬೆಟ್ಟದ ದಾರಿ, ಪಂಪಾ ಸರೋವರವರೆಗೆ ಮುಕ್ತಾಯವಾಗಲಿದೆ.ಮಾ.10ರ ಬೆಳಿಗ್ಗೆ 6 ಗಂಟೆಯೊಳಗಾಗಿ ನೋದಣಿ ಕಡ್ಡಾಯವಾಗಿರುತ್ತದೆ. ಈ ಮ್ಯಾರಾಥಾನ್ ಸ್ಪರ್ಧೆಯು 5 ಕಿ.ಮೀ ರಸ್ತೆ ಓಟ ಒಳಗೊಂಡಿದ್ದು, ಸ್ಪರ್ಧಾಳುಗಳ ವೈದ್ಯರಿಂದ ದೈಹಿಕ ಸಧೃಡ ಪ್ರಮಾಣ ಪತ್ರ ಕಡ್ಡಾಯವಾಗಿ ತರತಬೇಕು. ಸ್ಪರ್ಧಾಳುಗಳು ನಿಗದಿತ ಸಮಯದೊಳಗೆ ಹಾಜರಿರಬೇಕು. ನಿರ್ಣಾಯಕರ ನಿರ್ಣಯವೇ ಅಂತಿಮ ತೀರ್ಮಾನವಾಗಿರುತ್ತದೆ. ಕ್ರೀಡಾಪಟುಗಳಿಗೆ ಊಟದ ವ್ಯವಸ್ಥೆ ಇದ್ದು, ಪ್ರಯಾಣ ಭತ್ಯೆ, ದಿನಭತ್ಯೆ, ನೀಡಲಾಗುವುದಿಲ್ಲ. ನೋಂದಣಿ ಮಾಡಿಸುವಾಗ ತಂಡದ ಪ್ರತಿಯೊಬ್ಬ ಸದಸ್ಯರ ಆಧಾರ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕದ ಝರಾಕ್ಸ್ ಪ್ರತಿಯನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ವಿಜೇತರಾದ ಕ್ರೀಡಾಪಟುಗಳಿಗೆ ನಗದು ಬಹುಮಾನವನ್ನು ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಶರಣಬಸವ ಬಂಡಿಹಾಳ ಮೊ.9036773070, ಶಿವಕಾಂತ ಮೊ: 9916799482, ವಿಠಲ ನಾಗ್ಲಿ ಮೊ: 9964279957ಗೆ ಸಂಪರ್ಕಿಸಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ವಿಠ್ಠಲ ಜಾಬಗೌಡ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆನ್ಲೈನ್ ವಂಚನೆ ಬಗ್ಗೆ ಜಾಗೃತಿ



ಬೆಳಗಾವಿ.ಕೇಳ್ಕರ್‌ಬಾಗ್‌ನಲ್ಲಿರುವ ಅಭಿಜಿತ್ ಬೇಕ್ವಾಡ್ಕರ್ ಅವರ ಮೊಬೈಲ್ ಅಂಗಡಿಯಲ್ಲಿ, ಆನ್‌ಲೈನ್ ವಂಚನೆಯ ಬಗ್ಗೆ ನಾಗರಿಕರಿಗೆ ಅರಿವು ಮೂಡಿಸಲಾಯಿತು. ಆನ್‌ಲೈನ್ ವಂಚನೆ ಹೆಚ್ಚುತ್ತಿದ್ದು, ಆನ್‌ಲೈನ್ ವಂಚನೆ ಪ್ರಕರಣದಲ್ಲಿ ಸೈಬರ್ ಕ್ರೈಂ ವಿಭಾಗದ ನೆರವು ತಕ್ಷಣವೇ ತೆಗೆದುಕೊಳ್ಳಬೇಕು. ಸಾಮಾಜಿಕ ಕಾರ್ಯಕರ್ತ ಪ್ರಸಾದ್ ಚೌಗುಲೆ ನೇತೃತ್ವದಲ್ಲಿ ಆನ್‌ಲೈನ್ ವಂಚನೆಗೆ ಸಂಬಂಧಿಸಿದಂತೆ ಸೈಬರ್ ಅಪರಾಧಗಳ ಕುರಿತು ಸಾರ್ವಜನಿಕ ಜಾಗೃತಿ ಫಲಕವನ್ನು ಹಾಕಲಾಯಿತು. ಈ ವೇಳೆ ಸಾಮಾಜಿಕ ಹೋರಾಟಗಾರರಾದ ಪ್ರಸಾದ ಚೌಗುಲೆ, ಅಭಿಜಿತ್ ಬೇಕ್ವಾಡಕರ, ಪವನ ಕಂಗ್ರಾಳ್ಕರ್ ಹಾಗೂ ನಾಗರಿಕರು ಉಪಸ್ಥಿತರಿದ್ದರು.

# ಲಕ್ಷ್ಮೀಬಾಯಿ ನಿಡಸೊಸಿ ನಿಧನ



ಮೂಡಲಗಿ ಪಟ್ಟಣ ಲಕ್ಷ್ಮೀ ನಗರದ ನಿವಾಸಿ ಲಕ್ಷ್ಮೀಬಾಯಿ ಬಸವರಾಜ ನಿಡಸೊಸಿ(75) ಗುರುವಾರದಂದು ನಿಧನರಾದರು. ಮೃತರು ಇಬ್ಬರು ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲ್ಲಿದಾರೆ.